# ಕನ್ನಡ ಪೋಸ್ಟ್

KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಸಂಪಾದಕ : ಮಂಜು ಬನವಾಸೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 16 | Pages. 2 | Date: 11-12-2025, THURSDAY | RNI NO: KARKAN/2024/89601 | Kannada Daily

ಸಂಪುಟ : 02 – ಸಂಚಿಕೆ : 16 – ಪುಟಗಳು : 2 | 11-12-2025 | ಗುರುವಾರ | Ph: 8762954248 | ದರ : ₹1


# ಪಿಯು ಫಲಿತಾಂಶದಲ್ಲಿ ಸುಧಾರಣೆಗೆ ಶ್ರಮಿಸಿ

## ಉಪನ್ಯಾಸಕರಿಗೆ ಡಿಡಿಪಿಯು ಗಂಗಾಧರ್ ಸಲಹೆ | ಶೈಕ್ಷಣಿಕ ಕಾರ್ಯಾಗಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಮಕ್ಕಳಿಗೆ ಮನದಟ್ಟಾಗುವ ರೀತಿಯಲ್ಲಿ ಪಾಠ ಮಾಡಿ ಫಲಿತಾಂಶದಲ್ಲಿ ಪ್ರಗತಿ ಸಾಧಿಸಬೇಕು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ಪಿ.ಗಂಗಾಧರ್ ಉಪನ್ಯಾಸಕರಿಗೆ ಸಲಹೆ ನೀಡಿದರು.

ಪದವಿ ಪೂರ್ವ ಶಿಕ್ಷಣ ಇಲಾಖೆ, ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಗಣಿತ ಶಾಸ್ತ್ರ ವೇದಿಕೆಯಿಂದ ನಗರದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಬುಧವಾರ ಏರ್ಪಡಿಸಿದ್ದ 2025-26ನೇ ಸಾಲಿನ ಶೈಕ್ಷಣಿಕ ಕಾರ್ಯಾಗಾರ ಮತ್ತು ಪ್ರತಿಭಾ ಪುರಸ್ಕಾರ ಪ್ರದಾನ ಸಮಾರಂಭ ಉದ್ಘಾಟಿಸಿ ಮಾತನಾಡಿ, ಜಿಲ್ಲೆಯ ಕೆಲ ಕಾಲೇಜುಗಳ ಉಪನ್ಯಾಸಕರು ನಿಯಮಿತವಾಗಿ ತಮ್ಮ ಹಾಗೂ ವಿದ್ಯಾರ್ಥಿಗಳ ಹಾಜರಾತಿ ದಾಖಲಿಸುವಲ್ಲಿ ವಿಳಂಬ ಮಾಡಿದ್ದರಿಂದ ಶೇ. 24 ರಷ್ಟು ಕೊರತೆಯಾಗಿದ್ದು, ನೀವು ಮಾಡುವ ತಪ್ಪಿಗೆ ನನ್ನನ್ನು ಹೊಣೆಗಾರರನ್ನಾಗಿಸಬೇಡಿ ಎಂದು ಮನವಿ ಮಾಡಿದರು.

ಇಲಾಖೆ ಕಾರ್ಯದರ್ಶಿಗಳು ಇತ್ತೀಚೆಗೆ ನಡೆಸಿದ ಸಭೆಯೊಂದರಲ್ಲಿ ಅಧಿಕಾರಿಯೊಬ್ಬರನ್ನು ಉದ್ದೇಶಿಸಿ ಎಲ್ಲರೆದುರು ಅವಹೇಳನಕಾರಿಯಾಗಿ ಮಾತನಾಡಿದರು. ನನಗೆ ಆ ರೀತಿ ಬೈಯ್ದರೆ ಆ ದಿನವೇ ವೃತ್ತಿಗೆ ರಾಜೀನಾಮೆ ನೀಡುತ್ತೇನೆ. ಮಾಡದ ತಪ್ಪಿಗೆ ಅವಮಾನ ಸಹಿಸಿಕೊಳ್ಳುವ ಮನಸ್ಥಿತಿ ನನ್ನದಲ್ಲ. ದ್ವಿತೀಯ ಪಿಯುಸಿ ಪರೀಕ್ಷೆಗಳು ಸಮೀಪಿಸುತ್ತಿದ್ದು ಯಾವ ಕಾರಣಕ್ಕೂ ಹಾಜರಾತಿ ನೀಡುವಲ್ಲಿ ನಿರ್ಲಕ್ಷ್ಯ ತೋರಬಾರದೆಂದು ತೀಕ್ಷ್ಣವಾಗಿ ಹೇಳಿದರು. ಫಲಿತಾಂಶದಲ್ಲಿ ಜಿಲ್ಲೆ ಈ ಬಾರಿ ಉತ್ತಮ ಸ್ಥಾನದಲ್ಲಿರಬೇಕು. ಅಧಿಕಾರಿಗಳ ಸಭೆಯಲ್ಲಿ ನಿಮ್ಮ ಪ್ರಯತ್ನವನ್ನು ಪ್ರಸ್ತುತಪಡಿಸಬೇಕು. ನೀಲನಕ್ಷೆ, ಕ್ವಷನ್ ಬ್ಯಾಂಕ್, ಮಾದರಿ ಪ್ರಶ್ನೆ ಪತ್ರಿಕೆ ತಯಾರಿಸಿ ಮಕ್ಕಳಿಗೆ ಪರೀಕ್ಷೆ ನಡೆಸಿ ಭಯ ಹೋಗಲಾಡಿಸಿರುವ ಕುರಿತು ಹೇಳಬೇಕು.

ಮಗು ಎಷ್ಟೇ ಬುದ್ದಿವಂತನಾಗಿದ್ದರೂ ಪ್ರಶ್ನೆ ಪತ್ರಿಕೆಯ ಮಾಹಿತಿ ಹೊಂದಿದ್ದರಿದ್ದರೆ ಅಂಕಗಳಿಸಲು ಸಾಧ್ಯವಿಲ್ಲ. ಆದ್ದರಿಂದ ಇನ್ನುಳಿದ ಸಮಯವನ್ನು ಪ್ರಶ್ನೆಪತ್ರಿಕೆಗಳತ್ತ ಗಮನ ಹರಿಸಿ ವಿದ್ಯಾರ್ಥಿಗಳನ್ನು ಅಂತಿಮ ಪರೀಕ್ಷೆಗೆ ಸಜ್ಜುಗೊಳಿಸಬೇಕೆಂದು ಸಲಹೆ ನೀಡಿದರು.

1980-90ರ ಶಿಕ್ಷಣಕ್ಕೂ ಪ್ರಸ್ತುತ ದಿನಮಾನಗಳ ಶೈಕ್ಷಣಿಕ ವ್ಯವಸ್ಥೆಗೆ ಭಾರೀ ಬದಲಾವಣೆಯಾಗಿದೆ. ಮೊದಲೆಲ್ಲ ಗಣಿತ ಕಲಿಕೆಯೆಂದರೆ ವಿದ್ಯಾರ್ಥಿಗಳು ಹೆದರುತ್ತಿದ್ದರು. ಆದರೀಗ ಉಪನ್ಯಾಸಕರು ಸಾಕಷ್ಟು ತಯಾರಿ ಮಾಡಿಕೊಂಡು ಆಧುನಿಕ ತಂತ್ರಜ್ಞಾನಗಳೊಂದಿಗೆ ಸುಲಭವಾಗಿ ಅರ್ಥವಾಗುವಂತೆ ಪಾಠ ಮಾಡುತ್ತಾರೆ. ಇದರಿಂದ ಮಕ್ಕಳು ಹೆಚ್ಚು ಅಂಕ ಪಡೆಯಲು ಸಾಧ್ಯವಾಗುತ್ತಿದೆ. ಗಣಿತ ಶಾಸ್ತ್ರ ವಿಭಾಗದಿಂದ ಕಾರ್ಯಕ್ರಮ ಆಯೋಜಿಸಿರುವುದು ಒಳ್ಳೆಯ ಬೆಳವಣಿಗೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

> ಗಣಿತ ವಿಷಯ ಕಬ್ಬಿಣದ ಕಡಲೆ ಎಂಬ ಮಾತಿತ್ತು. ಇತ್ತೀಚಿನ ದಿನಗಳಲ್ಲಿ ಈ ವಿಷಯದಲ್ಲೂ ವಿದ್ಯಾರ್ಥಿಗಳು ಪೂರ್ಣ ಅಂಕ ಪಡೆಯುತ್ತಿರುವುದು ಶಿಕ್ಷಣ ವ್ಯವಸ್ಥೆಯ ಸುಧಾರಣೆಗೆ ಸಾಕ್ಷಿಯಾಗಿದೆ. ಉತ್ತಮ ಬೋಧನೆ ಮತ್ತು ಮಕ್ಕಳ ಆಸಕ್ತಿಯ ಕಲಿಕೆಯಿಂದ ಈ ವರ್ಷದ ಪಿಯುಸಿ ಫಲಿತಾಂಶದಲ್ಲಿ ಸಾಕಷ್ಟು ಪ್ರಗತಿ ಸಾಧ್ಯವಾಗಲಿದೆ.
>
> **- ಕೆ.ಪಿ.ಗಂಗಾಧರ್, ಡಿಡಿಪಿಯು**

ನಿವೃತ್ತ ಪ್ರಭಾರ ಉಪನಿರ್ದೇಶಕ ರಮೇಶ್ ಮಾತನಾಡಿ, ಎಲ್ಲಾ ಪತ್ರಿಕ್ರಮಗಳನ್ನೊಳಗೊಂಡ ಸಂಘ ಮಾಡಿ ಕಾರ್ಯಕ್ರಮ ನಡೆಸುತ್ತಿದ್ದರು. ಆದರೆ ಗಣಿತಕ್ಕೆ ಯಾವ ಸಂಘವಿಲ್ಲದೆ ಇರುವ ಸಂದರ್ಭದಲ್ಲಿ ಅನೇಕ ರೀತಿಯ ಹೋರಾಟಗಳನ್ನು ಮಾಡಿ ಒಂದು ಸಂಘ ಮಾಡಿರುವುದು ಒಳ್ಳೆಯ ಕಾರ್ಯವೆಂದು ಶ್ಲಾಘಿಸಿದರು.

2025-26ನೇ ಸಾಲಿನಲ್ಲಿ ನಿವೃತ್ತರಾದ ಗಣಿತ ಉಪನ್ಯಾಸಕರಾದ ಅನಂತ ಪದ್ಮನಾಭಸ್ವಾಮಿ, ಕೃಷ್ಣಮೂರ್ತಿ, ಶಿವಕುಮಾರ್ ಹಾಗು ಕಳೆದ ಸಾಲಿನ ಪರೀಕ್ಷೆಯಲ್ಲಿ ಗಣಿತ ವಿಷಯದಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಎಚ್.ಎಲ್.ಮಲ್ಲೇಶಗೌಡ, ಜಿಲ್ಲಾ ಗಣಿತ ಶಾಸ್ತ್ರ ವೇದಿಕೆ ಅಧ್ಯಕ್ಷ ವೆಂಕಟೇಶ್, ಡಿ.ವಿ.ಸುರೇಶ್, ಬಿ.ಆರ್.ದೇವರಾಜು, ಪ್ರಶಾಂತಕುಮಾರ್, ಸುರೇಶ್, ಗಿರೀಶ್, ಉದಯಕುಮಾರ್, ಎಸ್. ಲೋಕೇಶ್, ನಂದಿನಿ, ಪುರುಷೋತ್ತಮ್, ಮೋಹನ್ ಕುಮಾರ್, ಶೋಭಾ, ಪ್ರಾಣೇಶ್ ರಾವ್ ಹಾಗೂ ಇತರರಿದ್ದರು.

# ಅಂಗನವಾಡಿ ನೌಕರರಿಗೆ ನೆರವಾಗುವಂತೆ ಸಂಸದರ ಮನವಿ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ನವದೆಹಲಿ: ಕೇಂದ್ರ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಸಚಿವೆ ಅನ್ನಪೂರ್ಣದೇವಿ ಅವರನ್ನು ಭೇಟಿಯಾದ ಸಂಸದ ಶ್ರೇಯಸ್ ಪಟೇಲ್ ಅವರು ರಾಜ್ಯದ ಅಂಗನವಾಡಿ ಕಾರ್ಯಕರ್ತರು ಹಾಗೂ ಸಹಾಯಕರ ಬೇಡಿಕೆಗಳ ಈಡೇರಿಸುವಂತೆ ಮನವಿ ಸಲ್ಲಿಸಿದರು.

ಅಂಗನವಾಡಿ ಕಾರ್ಯಕರ್ತರು ಮತ್ತು ಸಹಾಯಕರು ಕಳೆದ 10 ವರ್ಷಗಳಿಂದ ಭತ್ಯೆ ಪರಿಷ್ಕರಣೆ ಆಗದೆ ಸಂಕಷ್ಟದಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಪ್ರಸ್ತುತ 4,500 ರೂ. (ಕಾರ್ಯಕರ್ತರು) ಮತ್ತು 2,250 (ಸಹಾಯಕರು) ರೂ. ಪಡೆಯುತ್ತಿದ್ದಾರೆ. ಜೀವನ ವೆಚ್ಚ ಏರಿಕೆ ಮತ್ತು ಕೆಲಸದ ಭಾರ ಹೆಚ್ಚಳದಿಂದ ಈ ಸಂಭಾವನೆ ತುಂಬಾ ಕಡಿಮೆಯಾಗಿದೆ.

ಜೊತೆಗೆ ಡಿ.ಎ ಮತ್ತು ಚಾರ್ಜ್ ಅಲೌನ್ಸ್ ಗಳ ಹೆಚ್ಚಳವೂ ಹಲವು ವರ್ಷಗಳಿಂದ ಬಾಕಿ ಇದೆ. ಮಕ್ಕಳು, ಗರ್ಭಿಣಿಯರು ಹಾಗೂ ಸಮುದಾಯದೊಂದಿಗೆ ಕೆಲಸ ಮಾಡುವ ಮುಂಚೂಣಿ ಸಿಬ್ಬಂದಿಗೆ ಇ ಹಾಗೂ ಸಾಮಾಜಿಕ ಭದ್ರತೆ ಅಗತ್ಯವಾಗಿದೆ. ಇವರ ಕಲ್ಯಾಣಕ್ಕಾಗಿ ಭತ್ಯೆ ಪರಿಷ್ಕರಣೆ, ಚಾರ್ಜ್ ಅಲೌನ್ಸ್ ಹೆಚ್ಚಳ ಮತ್ತು ESI ಸೌಲಭ್ಯಗಳನ್ನು ತಕ್ಷಣ ಒದಗಿಸಲು ಕ್ರಮ ಕೈಗೊಳ್ಳುವಂತೆ ಕೋರಿದರು.

# ಅರ್ಜುನನ ಅಂತ್ಯಕ್ರಿಯೆಗಾಗಿ ಹೋರಾಡಿದವರಿಗೆ ಸಮನ್ಸ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಸಕಲೇಶಪುರ: ಕಾಡಾನೆ ಹಿಡಿಯುವ ಕಾರ್ಯಾಚರಣೆ ವೇಳೆ ಮೃತಪಟ್ಟ ಅಂಬಾರಿ ಹೊರುತ್ತಿದ್ದ ಅರ್ಜುನ ಸಾಕಾನೆಯ ಸಮಾಧಿ ಸ್ಥಳದ ಕುರಿತು 2023ರ ಡಿ. 5ರಂದು ನಡೆದ ಪ್ರತಿಭಟನೆ ಹಿನ್ನೆಲೆಯಲ್ಲಿ ದೂರು ದಾಖಲಾಗಿ 19 ಪ್ರತಿಭಟನಕಾರರಿಗೆ ನ್ಯಾಯಾಲಯದಿಂದ ಸಮನ್ಸ್ ಜಾರಿಯಾಗಿದೆ.

2023ರ ಡಿ. 4 ರಂದು ತಾಲ್ಲೂಕಿನ, ದಬ್ಬಳ್ಳಿಕಟ್ಟೆ ಮೀಸಲು ಅರಣ್ಯದಲ್ಲಿ ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ಕಾಡಾನೆ ಜೊತೆ ಕಾದಾಡಿ ಅಂಬಾರಿ ಹೊರುತ್ತಿದ್ದ ಸಾಕಾನೆ ಅರ್ಜುನ ಸಾವನ್ನಪ್ಪಿತ್ತು. ಮಾರನೇ ದಿನ ಮೃತ ಕಾಡಾನೆಯ ಅಂತ್ಯಸಂಸ್ಕಾರದ ವೇಳೆ ಮೀಸಲು ಅರಣ್ಯದಲ್ಲಿ ಅಂತ್ಯಸಂಸ್ಕಾರ ಬೇಡ, ಬೇರೆಡೆ ಅಂತ್ಯಸಂಸ್ಕಾರ ಮಾಡಿ ಪ್ರತಿಮೆ ನಿರ್ಮಿಸಿ ಎಂದು ಕೆಲವರು ವಿರೋಧ ವ್ಯಕ್ತಪಡಿಸಿದ್ದರು. ಈ ಸಂಧರ್ಭದಲ್ಲಿ ಲಾಠಿ ಚಾರ್ಜ್ ಸಹ ನಡೆದಿತ್ತು. ಅರ್ಜುನನನ್ನು ಹೂಳಲು ಗುಂಡಿ ಬಗೆಯುತ್ತಿದ್ದ ಜೆಸಿಬಿ ತಡೆದಿದ್ದಲ್ಲದೆ ಕರ್ತವ್ಯಕ್ಕೆ ಅಡ್ಡಿಪಡಿಸಿದ್ದಾರೆ ಎಂದು ಕರ್ತವ್ಯದಲ್ಲಿದ್ದ ಪೊಲೀಸ್ ಕಾನ್ಸ್ಟೇಬಲ್ ಗಿರೀಶ್.ಬಿ.ಎಂ. ಎಂಬುವವರು ಯಸಳೂರು ಪೊಲೀಸ್ ಠಾಣೆಗೆ ದೂರು ನೀಡಿದ್ದು, 19 ಜನರ ಮೇಲೆ ಎಫ್ಐಆರ್ ದಾಖಲಾಗಿತ್ತು.

ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ಅಂಬಾರಿ ಆನೆ ಅರ್ಜುನ ಸಾವನ್ನಪ್ಪಿದ್ದು ಅಂತ್ಯಸಂಸ್ಕಾರಕ್ಕೆ ಅಡ್ಡಿಪಡಿಸಿದ ಆರೋಪದ ಮೇಲೆ ಹಲವರ ವಿರುದ್ಧ ಎಫ್ಐಆರ್ ದಾಖಲಾಗಿದ್ದು 19 ಮಂದಿಗೆ ನ್ಯಾಯಾಲಯ ಸಮನ್ಸ್ ಜಾರಿ ಮಾಡಿದೆ. ಪರಿಸರ ಪ್ರೇಮಿ ಹುರುಡಿ ವಿಕ್ರಂ, ಕೆಪಿಸಿಸಿ ಸದಸ್ಯ ಯಡೇಹಳ್ಳಿ ಮಂಜುನಾಥ್, ಉದಯ, ನವೀನ, ನಾಗರಾಜು, ಶೋದನ್, ರವಿ, ಆಕಾಶ, ರತನ್, ಕಿರಣ್, ಆನಂದ, ದೇವರಾಜು, ತ್ರೀವೇಣ್ ಗೌಡ, ಜಯಪ್ಪ, ಸಂತೋಷ, ಸಚಿನ್, ಜಗದೀಶ, ಮನು, ಮಿಥುನ್ ಸೇರಿ 19 ಮಂದಿ ಡಿ. 30ರಂದು ನ್ಯಾಯಾಧೀಶರ ಮುಂದೆ ಹಾಜರಾಗುವಂತೆ ಸಮನ್ಸ್ ಜಾರಿ ಮಾಡಿದ್ದಾರೆ.

### ಕೆಪಿಸಿಸಿ ಸದಸ್ಯತ್ವಕ್ಕೆ ರಾಜೀನಾಮೆ

ತಾಲೂಕಿನಲ್ಲಿ ಹೋರಾಟಗಾರ ಕೆಪಿಸಿಸಿ ಸದಸ್ಯ ಯಡೇಹಳ್ಳಿ ಮಂಜುನಾಥ್ ಮೇಲೆ ಪ್ರಕರಣ ದಾಖಲಾಗಿರುವುದಕ್ಕೆ ಬೇಸರ ವ್ಯಕ್ತಪಡಿಸಿ ಕೆಪಿಸಿಸಿ ಅಧ್ಯಕ್ಷ ಡಿ.ಕೆ ಶಿವಕುಮಾರ್, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಲಕ್ಷ್ಮಣ್ ಅವರಿಗೆ ರಾಜೀನಾಮೆ ಪತ್ರ ರವಾನಿಸಿದ್ದಾರೆ. ಈ ಕುರಿತು ಅವರು ಪ್ರತಿಕ್ರಿಯಿಸಿದ್ದು ಹೋರಾಟಗಾರರ ವಿರುದ್ಧ ಈ ರೀತಿ ಮಾಡುವುದು ಸರಿಯಲ್ಲ, ಹೀಗಾಗಿ ನಾನು ಕೆಪಿಸಿಸಿ ಸದಸ್ಯತ್ವಕ್ಕೆ ರಾಜೀನಾಮೆ ಸಲ್ಲಿಸುತ್ತಿದ್ದೇನೆ ಎಂದಿದ್ದಾರೆ.

# ಮಾನವ ಹಕ್ಕು ಉಲ್ಲಂಘಿಸಿದರೆ ಶಿಕ್ಷೆ ಖಚಿತ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಸ್ವತಂತ್ರವಾಗಿ ಜೀವಿಸುವ, ಮಾತನಾಡುವ, ಇಷ್ಟದ ಧರ್ಮ ಪಾಲಿಸುವ, ದುಡಿಯುವ ಹಕ್ಕಿದ್ದು ಅವುಗಳ ಮೇಲೆ ಯಾರಾದರೂ ಪ್ರಹಾರ ನಡೆಸಿದರೆ ಕಾನೂನು ಕ್ರಮ ಜರುಗಿಸಲಾಗುತ್ತದೆ ಎಂದು ಪೋಕ್ಸೋ ನ್ಯಾಯಾಧೀಶ ದೇವರಾಜು ಹೇಳಿದರು.

ನಾಗರಿಕ ಹಕ್ಕುಗಳ ಸಂರಕ್ಷಣಾ ಸಂಘ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಎಂ. ಕೃಷ್ಣ ಕಾನೂನು ಕಾಲೇಜು ಹಾಗೂ ಸರ್ಕಾರಿ ಕಾನೂನು ಕಾಲೇಜಿನಿಂದ ನಗರದ ಎಂ.ಕೃಷ್ಣ ಕಾನೂನು ಕಾಲೇಜಿನಲ್ಲಿ ಬುಧವಾರ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಮಾನವ ಹಕ್ಕುಗಳ ದಿನಾಚರಣೆ ಉದ್ಘಾಟಿಸಿ ಮಾತನಾಡಿ, ಮನುಷ್ಯನನ್ನು ಮನುಷ್ಯನಾಗಿ ನೋಡದ ಪರಿಣಾಮ ಮಾನವ ಹಕ್ಕುಗಳ ಆಯೋಗವನ್ನು ವಿಶ್ವಸಂಸ್ಥೆ 1948ರಲ್ಲಿ ಘೋಷಿಸಿತು. ತನಗೆ ಸೂಕ್ತವಾವಾಗುವ ಧರ್ಮ, ಭಾಷೆ, ಉದ್ಯೋಗ, ಉಡುಗೆ, ಆಹಾರದ ಹಕ್ಕನ್ನು ಮನುಷ್ಯ ಹೊಂದಿರುತ್ತಾನೆ. ಲಿಂಗ ಅಥವಾ ಧರ್ಮದ ಆಧಾರದ ಮೇಲೆ ತಾರತಮ್ಯ ಮಾಡುವುದು ಶಿಕ್ಷಾರ್ಹ ಅಪರಾಧ. ಪುರುಷ ಮತ್ತು ಸ್ತ್ರೀ ತಾರತಮ್ಯವನ್ನು ಕಾನೂನು ಸಹಿಸುವುದಿಲ್ಲ ಎಂದರು.

ಹದಿಹರೆಯದ ವಯಸ್ಸಿನಲ್ಲಿ ಪ್ರೀತಿಯ ಮೋಹದ ಬಲೆಗೆ ಸಿಲುಕಿ ಜೀವನ ಹಾಳು ಮಾಡಿಕೊಳ್ಳಬಾರದು. ದೇಶದಲ್ಲಿ ಪೋಕ್ಸೋ ಕಾಯ್ದೆ ಬಲಿಷ್ಟವಾಗಿದ್ದು ಅಪರಾಧಿ ಎಂದು ಸಾಬೀತಾದರೆ ಪೂರ್ತಿ ಜೀವನವನ್ನು ಜೈಲಿನಲ್ಲೇ ಕಳೆಯಬೇಕಾಗುತ್ತದೆ. ಓದುವ ವಯಸ್ಸಿನಲ್ಲಿ ಯುವಕ-ಯುವತಿಯರು ಬೇರೆಡೆ ಗಮನ ಹರಿಸದೆ ಉತ್ತಮ ಭವಿಷ್ಯ ಕಟ್ಟಿಕೊಳ್ಳಬೇಕೆಂದು ಕಿವಿಮಾತು ಹೇಳಿದರು.

ಅಪ್ರಾಪ್ತರು ಕ್ಷಣಿಕ ಸುಖಕ್ಕಾಗಿ ದುಶ್ಚಟಗಳ ದಾಸರಾಗಬಾರದು. ಒಳ್ಳೆಯವರ ಸಹವಾಸ, ಮಾನವೀಯ ಮೌಲ್ಯಗಳ ಅಳವಡಿಕೆ, ಸದ್ವಿಚಾರಗಳ ಮೂಲಕ ದೇಶಕ್ಕೆ ಒಳ್ಳೆಯ ಪ್ರಜೆಗಳಾಗಿ ಬೆಳೆಯಬೇಕು. ಹಾಸನದಲ್ಲಿ 15ಕ್ಕಿಂತ ಕಡಿಮೆ ವಯಸ್ಸಿನವರು ಪೋಕ್ಸೋ ಕೇಸುಗಳಲ್ಲಿ ಹೆಚ್ಚು ಭಾಗವಹಿಸುತ್ತಿರುವುದು ಆತಂಕ ಮೂಡಿಸಿದೆ ಎಂದು ಆತಂಕ ವ್ಯಕ್ತಪಡಿಸಿದರು.

ನಾಗರಿಕ ಹಕ್ಕುಗಳ ಸಂರಕ್ಷಣಾ ಸಂಘದ ಅಧ್ಯಕ್ಷ ಅಬ್ದುಲ್ ಹಮಿದ್ ಪ್ರಾಸ್ತಾವಿಕವಾಗಿ ಮಾತನಾಡಿ, ಅತ್ತೆ-ಸೊಸೆ ಜಗಳ, ಮರ್ಯಾದೆ ಹತ್ಯೆ, ಲೈಂಗಿಕ ಕಿರುಕುಳ, ಬಾಲಾಪರಾಧಗಳೆಲ್ಲವೂ ಸಮಾಜ ಬಾಹಿರ ಕೃತ್ಯಗಳಾಗಿವೆ. ಮಹಿಳಾ ಸ್ವಾತಂತ್ರ್ಯ ಕಾಪಾಡುವುದು ಎಲ್ಲರ ಜವಾಬ್ದಾರಿ ಎಂದು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ, ಸರ್ಕಾರಿ ಕಾನೂನು ಕಾಲೇಜು ಪ್ರಾಂಶುಪಾಲೆ ಸೀನಾ ಥಾಮಸ್, ಎಂ.ಕೃಷ್ಣ ಕಾಲೇಜು ಪ್ರಾಂಶುಪಾಲ ವಿ.ಶ್ರೀನಿವಾಸ್, ವಕೀಲ ಅನ್ವಾದ್ ಪಾಳ್ಯ, ಚಿಂತಕ ಹೆಚ್.ಕೆ.ವಿವೇಕಾನಂದ, ಎಸ್.ಶರಣ್ಯ ಇತರರಿದ್ದರು.

# ಎಂಸಿಇ ಆಡಳಿತಾತ್ಮಕ ವಿಚಾರಕ್ಕೆ ತಡೆ ನೀಡಿಲ್ಲ: ಜಗದೀಶ್ ಚೌಡಳ್ಳಿ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮಲೆನಾಡು ಕಾಲೇಜು ಆಡಳಿತ ಮಂಡಳಿಗೆ ಸಂಬಂಧಿಸಿ ಕಾರ್ಯಕಾರಿ ಸಮಿತಿ ಸಭೆ ನಡೆಸದಂತೆ ಕರ್ನಾಟಕ ಹೈಕೋರ್ಟ್ ತಡೆಯಾಜ್ಞೆ ನೀಡಿದ್ದು, ಆಡಳಿತಾತ್ಮಕ ವಿಚಾರವಾಗಿ ಯಾವುದೇ ತಡೆಯಾಜ್ಞೆ ನೀಡಿಲ್ಲ. ಹಾಸನದ ನ್ಯಾಯಾಲಯದ ಆದೇಶದನ್ವಯ ನಾವು ಕಾರ್ಯಚಟುವಟುಕೆಯನ್ನು ಮುಂದುವರೆಸುತ್ತೇವೆ ಎಂದು ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಜಗದೀಶ್ ಚೌಡಳ್ಳಿ ತಿಳಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಾಸನದ ನ್ಯಾಯಾಲಯ ನಮ್ಮ ಪರ ತೀರ್ಪು ನೀಡಿದ್ದು, ಆಡಳಿತಾತ್ಮಕ ವಿಚಾರದಲ್ಲಿ ಯಾವ ತೊಂದರೆ ನೀಡದಂತೆ ಎದುರಾಳಿಗಳಿಗೆ ಸ್ಪಷ್ಟವಾಗಿ ಸೂಚನೆ ನೀಡಿದೆ.

ಅಂತೆಯೇ ಪ್ರತಿ ಡಿಸೆಂಬರ್‌ನಲ್ಲಿ ನಮ್ಮ ಸಂಸ್ಥೆಯ ಸಾಮಾನ್ಯ ಸಭೆ ಕರೆಯಬೇಕು. ಅಂತೆಯೇ ಅದರ ಬಗ್ಗೆ ಹಾಗೂ ಕಾಲೇಜಿನ ಅಭಿವೃದ್ಧಿಗಳ ಬಗ್ಗೆ ಚರ್ಚಿಸುವ ಉದ್ದೇಶದಿಂದ ಡಿ.11 ರಂದು ಸಭೆ ನಿಗದಿ ಪಡಿಸಿ ಅಮಾನತ್ತುಗೊಂಡಿದ್ದ ಮೂವರನ್ನು ಹೊರತುಪಡಿಸಿ ಉಳಿದ 21 ನಿರ್ದೇಶಕರಿಗೆ ಸಭೆಗೆ ಹಾಜರಾಗುವಂತೆ ಆಹ್ವಾನ ನೀಡಲಾಗಿತ್ತು.

ನಮ್ಮ ಕೆಲ ಸಹ ನಿರ್ದೇಶಕರು ಸಭೆ ನಡೆಸದಂತೆ ತಡೆಯಾಜ್ಞೆ ಕೋರಿ ಹೈಕೋರ್ಟ್ ಮೆಟ್ಟಿಲೇರಿದ್ದಾರೆ. ಜ. 7ರ ಮುಂದಿನ ಆದೇಶದ ವರೆಗೆ ಸಭೆ ನಡೆಸದಂತೆ ಕೋರ್ಟ್ ಸೂಚನೆ ನೀಡಿದೆ. ಕೋರ್ಟ್ ಆದೇಶವನ್ನು ಗೌರವಪೂರ್ವಕವಾಗಿ ಸ್ವಾಗತಿಸುತ್ತಾ, ಕಾನೂನಾತ್ಮಕವಾಗಿ ಅದಕ್ಕೆ ಉತ್ತರ ನೀಡುತ್ತೇವೆ.

ನಮಗೆ ಕೆಲಸ ಮಾಡಲು ಅವಕಾಶ ಸಿಕ್ಕಿದೆ. ನಮ್ಮ ಹಿರಿಯರಾದ ಮುದ್ದೇಗೌಡರ ಮಾರ್ಗದರ್ಶನದಲ್ಲಿ ಹಿರಿಯರಾದ ಅಶೋಕ್ ಹಾರನಹಳ್ಳಿ, ಗುರುದೇವ್ ಅವರನ್ನು ಸೇರಿದಂತೆ ಎಲ್ಲಾ ಒಗ್ಗಟ್ಟಿನಿಂದ ಸಂಸ್ಥೆಯ ಹಿತದೃಷ್ಟಿಯಿಂದ ಕಾರ್ಯ ನಿರ್ವಹಿಸಬೇಕೆಂಬುದು ನಮ್ಮ ಬಯಕೆ. ಮುಂದಿನ ದಿನಗಳಲ್ಲಿ ಅದಕ್ಕೆ ಅವರೂ ಸಹಕಾರ ನೀಡುತ್ತಾರೆ ಎಂಬ ಭರವಸೆ ಇದೆ ಎಂದರು.

# ಡಿ.6ರ ಸಮಾವೇಶದ ಲೆಕ್ಕ ಒದಗಿಸಲು ಜೆಡಿಎಸ್ ಆಗ್ರಹ

## ಫ್ಲೆಕ್ಸ್, ಬ್ಯಾನರ್‌ಗೆ ಅಭಿವೃದ್ಧಿ ಸೀಮಿತ | ಕಾಂಗ್ರೆಸ್ ವಿರುದ್ಧ ಟೀಕಾ ಪ್ರಹಾರ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್




ಹಾಸನ: ನಗರದಲ್ಲಿ ಡಿ. 6ರಂದು ನಡೆದ ಸರ್ಕಾರದ ಸೇವೆಗಳ ಸಮರ್ಪಣಾ ಸಮಾವೇಶಕ್ಕೆ ಆಗಿರುವ ಖರ್ಚಿನ ವಿವರವನ್ನು ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ನೀಡಬೇಕು ಎಂದು ಜೆಡಿಎಸ್ ಜಿಲ್ಲಾಧ್ಯಕ್ಷ ಕೆ.ಎಸ್.ಲಿಂಗೇಶ್ ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿ, ಡಿ. 6ರ ಸಮಾವೇಶವನ್ನು ಹಾಸನ ಬದಲು ಅರಸೀಕೆರೆಯಲ್ಲಿ ಮಾಡಬಹುದಿತ್ತು. ಆ ತಾಲ್ಲೂಕಿಗೆ ಅಧಿಕ ಯೋಜನೆ ಘೋಷಿಸಿದ್ದಾರೆ. ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಶ್ರೇಷ್ಠ ಆರ್ಥಿಕ ತಜ್ಞನಂತೆ ಮಾತನಾಡುತ್ತಾರೆ. ಅವರು ಜೆಡಿಎಸ್‌ನಲ್ಲೇ ಇದ್ದರು ಎಂಬುದನ್ನು ಮರೆಯಬಾರದೆಂದು ತಿರುಗೇಟು ನೀಡಿದರು.

ಜಿಲ್ಲೆಯ ಅಭಿವೃದ್ಧಿಗೆ ಈ ಸರ್ಕಾರದ ಕೊಡುಗೆ ಶೂನ್ಯ. ರಣಘಟ್ಟ ಏತ ನೀರಾವರಿ ಯೋಜನೆಗೆ ಅನುದಾನ ಕೊಟ್ಟಿಲ್ಲ. 60 ಕೆರೆಗಳಿಗೆ ನೀರು ಹರಿಸುವ ಮತ್ತೊಂದು ಯೋಜನೆಗೆ ಬಿಡಿಗಾಸು ನೀಡಿಲ್ಲ. ಹಿಂದಿನ ಸರ್ಕಾರದ ಯೋಜನೆಗಳ ಉದ್ಘಾಟಿಸುವುದೇ ಇವರ ಧ್ಯೇಯವಾಗಿದೆ. ರಸ್ತೆಯುದ್ದಕ್ಕೂ ಫ್ಲೆಕ್ಸ್ ಹಾಕಿರುವುದೇ ಕಾಂಗ್ರೆಸ್‌ನ ಸಾಧನೆಯಾಗಿದೆ. ನಾವು ಸರ್ಕಾರ ಪತನಗೊಳಿಸಲು ಪ್ರಯತ್ನಿಸುವುದಿಲ್ಲ. 2028ರ ಚುನಾವಣೆ ಟಿಕೆಟ್‌ಗಾಗಿ ಓಡಾಡುತ್ತಿರುವವರನ್ನು ಓಲೈಸುವುದನ್ನು ಬಿಟ್ಟು ಅಭಿವೃದ್ಧಿಗೆ ಗಮನ ಕೊಡಿ ಎಂದು ಸಲಹೆ ನೀಡಿದರು.

### ಬರಿಗೈಯಲ್ಲಿ ಜನರು ವಾಪಸ್

ಮಾಜಿ ಸಚಿವ ಹೆಚ್.ಕೆ.ಕುಮಾರಸ್ವಾಮಿ ಮಾತನಾಡಿ, ಜಿಲ್ಲೆಯ 50 ಸಾವಿರಕ್ಕೂ ಹೆಚ್ಚು ಕುಟುಂಬಗಳಿಗೆ ಸವಲತ್ತು ಒದಗಿಸುತ್ತೇವೆಂದು ಸಮಾವೇಶಕ್ಕೆ ಕರೆಸಿಕೊಂಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಾರ್ವಜನಿಕರನ್ನು ಬರಿಗೈಯಲ್ಲಿ ಕಳಿಸಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಕಂದಾಯ ಇಲಾಖೆಯ ದರಖಾಸ್ತು ಪೋಡಿ, ಪೌತಿ ಖಾತೆ, ಕಂದಾಯ ಗ್ರಾಮ, 94ಸಿ ಹಕ್ಕುಪತ್ರ ವಿತರಣೆ ಮಾಡುತ್ತಾರೆಂದು ಸಾವಿರಾರು ಜನರು ಆಸೆಗಣ್ಣಿನಿಂದ ಬಂದಿದ್ದರು. ವೇದಿಕೆಗೆ ಬಂದ ಮೇಲೆ ರಾಜಕೀಯ ಸಮಾವೇಶದಂತೆ ಭಾಸವಾಯಿತು. ಕಾಂಗ್ರೆಸ್‌ನ ಬಿಟ್ಟಿ ಪ್ರಚಾರಕ್ಕೆ ಸರ್ಕಾರದ ಹಣ ವ್ಯಯಿಸಿದ್ದಾರೆ ಎಂದು ಕಿಡಿಕಾರಿದರು. ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಉತ್ತಮ ಕೆಲಸ ಮಾಡುತ್ತಿದ್ದಾರೆ. ಸಮಾವೇಶದಲ್ಲಿ ಎಲ್ಲಾ ಫಲಾನುಭವಿಗಳಿಗೂ ಸೌಲಭ್ಯ ವಿತರಿಸುವುದಾಗಿ ಮೋಸ ಮಾಡಿದ್ದಾರೆ. ಸೌಲಭ್ಯ ಪಡೆದುಕೊಳ್ಳುವ ಆಸೆಗಾಗಿ ಅಂದು ಸಮಾವೇಶಕ್ಕೆ ಬಂದವರಿಗೆ ಇನ್ನೂ ಕೂಡ ಸೌಲಭ್ಯ ಸಿಗದೆ ನಿತ್ಯ ಕಚೇರಿಗೆ ಅಲೆದಾಡುತ್ತಿದ್ದಾರೆ ಎಂದರು.

> ಅರ್ಜುನ ಆನೆ ಸಾವಿನ ಬಗ್ಗೆ ತನಿಖೆ ನಡೆಸುವಂತೆ ಪ್ರತಿಭಟನೆ ನಡೆಸಿದ ಹೋರಾಟಗಾರರ ವಿರುದ್ಧ ಪ್ರಕರಣ ದಾಖಲಿಸಿರುವ ಕುರಿತು ಪ್ರತಿಕ್ರಿಯಿಸಿದ ಅವರು, ಪೊಲೀಸ್ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ತಮ್ಮ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಸಲುವಾಗಿ ಹಾಗೂ ಮಲೆನಾಡು ಭಾಗದ ಜನರನ್ನು ಹೆದರಿಸಲು ಕೇಸು ಹಾಕಿದ್ದಾರೆ. ಸರ್ಕಾರ ಕೂಡಲೇ ಪ್ರಕರಣ ಹಿಂಪಡೆಯಬೇಕು. ಇಲ್ಲದಿದ್ದರೆ ಹೋರಾಟ ನಡೆಸಲಾಗುವುದು.
>
> **- ಹೆಚ್.ಕೆ.ಕುಮಾರಸ್ವಾಮಿ, ಮಾಜಿ ಸಚಿವ**

ಕಾಂಗ್ರೆಸ್ ಸರ್ಕಾರವು ಕಳೆದ ಎರಡೂವರೆ ವರ್ಷದಲ್ಲಿ ಜಿಲ್ಲೆಗೆ ಎಷ್ಟು ಅನುದಾನ ಮಂಜೂರು ಮಾಡಿದೆ. ಉದ್ಘಾಟನೆಯಾಗಿರುವ ಕಾಮಗಾರಿಗಳಿಗೆ ಸರ್ಕಾರದ ಅನುದಾನ ಎಷ್ಟು ಎಂಬ ಕುರಿತು ಮಾಹಿತಿ ನೀಡಬೇಕೆಂದು ಒತ್ತಾಯಿಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಹೇಮಾವತಿ ಜಲಾಶಯದ ಬಳಿ ಉದ್ಯಾನವನ ನಿರ್ಮಾಣದ ಭರವಸೆ ನೀಡಿದ್ದಾರೆ. ಅದನ್ನು ನಾವು ಸ್ವಾಗತಿಸುತ್ತೇವೆ. ಈ ಹಿಂದೆ ನಾವು ಕೂಡ ಪ್ರಯತ್ನ ಮಾಡಿದ್ದೆವು. ಆದರೆ ಸಾಕರವಾಗಿರಲಿಲ್ಲ. ಇದು ಕೇವಲ ಭರವಸೆಯಾಗಿ ಉಳಿಯಬಾರದು. ಈ ಹಿಂದೆಯೂ ಮಲೆನಾಡು ಭಾಗದಲ್ಲಿ ರಸ್ತೆ ಕುಸಿತ ತಡೆಗೆ 299 ಕೋಟಿ ರೂ. ಕಳೆದ ಬಜೆಟ್‌ನಲ್ಲಿ ಘೋಷಿಸಿದ್ದರು. ಇದುವರೆಗೂ ಒಂದು ರೂ. ನೀಡಿಲ್ಲ. ಯೋಜನೆಗಳು ಕೇವಲ ಘೋಷಣೆಗೆ ಸೀಮಿತವಾಗಬಾರದೆಂದರು.

ರಾಜ್ಯ ಸರ್ಕಾರ ಅಭಿವೃದ್ಧಿ ಬದಲು ಭ್ರಷ್ಟಾಚಾರದಲ್ಲಿ ಮುಳುಗಿದೆ. ರಾಜ್ಯದಲ್ಲಿ ಶೇ. 80 ರಷ್ಟು ಭ್ರಷ್ಟಾಚಾರ ನಡೆಯುತ್ತಿದೆ. ಭಷ್ಟಾಚಾರದಲ್ಲಿ ಕರ್ನಾಟಕ ದೇಶದಲ್ಲೇ ಐದನೇ ಸ್ಥಾನದಲ್ಲಿದೆ. ಎಸ್‌ಸಿ, ಎಸ್‌ಟಿ ಸಮುದಾಯದ ಅಭಿವೃದ್ಧಿಗೆ ಅನುದಾನ ಬಿಡುಗಡೆ ಮಾಡಿಲ್ಲ. ಬಜೆಟ್‌ನಲ್ಲಿ ಘೋಷಿಸಿದ ಅನುದಾನದಲ್ಲಿ 930 ಕೋಟಿ ರೂ. ಬಳಕೆಯಾಗಿಲ್ಲವೆಂದು ಆರೋಪಿಸಿದರು.

# ಪೋಕ್ಸೊ-ಬಾಲ ಗರ್ಭಿಣಿ ಪ್ರಕರಣ ತಡೆಗೆ ಸೂಚನೆ

## ಜಿಲ್ಲಾದ್ಯಂತ ಅರಿವು ಕಾರ್ಯಕ್ರಮ ಹೆಚ್ಚಿಸಿ | ಅಧಿಕಾರಿಗಳಿಗೆ ಡಿಸಿ ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಜಿಲ್ಲೆಯಲ್ಲಿ ಪೋಕ್ಸೊ ಹಾಗೂ ಬಾಲ ಗರ್ಭಿಣಿಯರ ಪ್ರಕರಣಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಅಗತ್ಯ ಕ್ರಮ ಕೈಗೊಳ್ಳಲು ಕ್ರಿಯಾ ಯೋಜನೆ ತಯಾರಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪೋಕ್ಸೊ ಹಾಗೂ ಬಾಲ ಗರ್ಭಿಣಿಯರು, ಮಕ್ಕಳ ಸುರಕ್ಷತೆ ಕುರಿತು ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಸಮಾಜದಲ್ಲಿ ಹೆಣ್ಣು ಮಕ್ಕಳನ್ನು ಎರಡನೇ ದರ್ಜೆಯ ಪ್ರಜೆಯಾಗಿ ನೋಡುತ್ತಾರೆ. ಹೆಣ್ಣು ಮಕ್ಕಳ ಸುರಕ್ಷತೆ ಪ್ರತಿಯೊಬ್ಬರ ಜವಾಬ್ದಾರಿ. ಈ ಹಿನ್ನೆಯಲ್ಲಿ ಪ್ರತಿ ಮಂಗಳವಾರ ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿ ಕಚೇರಿಯಲ್ಲಿ ಸಭೆ ಹಾಗೂ ಸಂಜೆ 7 ಗಂಟೆಗೆ ಡಿಸ್ಕಸ್ ವಿತ್ ಡಿಸಿ ಎಂಬ ಕಾರ್ಯಕ್ರಮದೊಂದಿಗೆ ವಿಡಿಯೋ ಸಂವಾದದ ಮೂಲಕ ಎಲ್ಲಾ ವಸತಿ ಶಾಲೆ ಮತ್ತು ವಸತಿ ನಿಲಯಗಳ ಮಕ್ಕಳಲ್ಲಿ ಅರಿವು ಮೂಡಿಸಲುಕ್ರಮ ಕೈಗೊಳ್ಳುವಂತೆ ನಿರ್ದೇಶನ ನೀಡಿದರು.

ಹೆಣ್ಣು ಮಕ್ಕಳ ಸುರಕ್ಷತೆಯನ್ನುಗಂಭೀರವಾಗಿ ಪರಿಗಣಿಸಿ, ಉದಾಸೀನ ಮಾಡದೆ, ತೀವ್ರತೆಯನ್ನು ಅರಿತು ಸುರಕ್ಷತೆಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಸೇರಿದಂತೆ ಎಲ್ಲಾ ಇಲಾಖೆಯ ಅಧಿಕಾರಿಗಳು ಒಂದು ತಂಡವಾಗಿ ಕೆಲಸ ನಿರ್ವಹಿಸಬೇಕು ಎಂದು ತಿಳಿಸಿದರು.

ಹೆಣ್ಣು ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳು ಬೆಳಕಿಗೆ ಬರುವುದಿಲ್ಲ. ಎಂತಹ ಸಂದರ್ಭದಲ್ಲೂ ಕೂಡ ಧೃತಿಗೆಡದೆ ಧೈರ್ಯವಾಗಿ ನಡೆದ ಘಟನೆಯ ಬಗ್ಗೆ ಮುಕ್ತವಾಗಿ ಮಕ್ಕಳು ಹೇಳುವಂತೆ ಪ್ರಜ್ಞಾವಂತರನ್ನಾಗಿ ಮಾಡಬೇಕು. ಜೊತೆಗೆ ಸ್ವಯಂ ರಕ್ಷಣೆ ಮಾಡಿಕೊಳ್ಳಲು ತರಬೇತಿ ನೀಡುವುದರ ಮೂಲಕ ಸಜ್ಜುಗೊಳಿಸಬೇಕು ಎಂದರು.

ಹೆಣ್ಣು ಮಕ್ಕಳು ಯಾವುದೇ ತೊಂದರೆಗೆ ಸಿಲುಕಿದಾಗ ಅಂಜದೆ, ಸಂಕೋಚ ಪಡದೆ 1098ಗೆ ಕರೆ ಮಾಡುವಂತೆ ಅವರಿಗೆ ಧೈರ್ಯ ತುಂಬಬೇಕು. ಶಾಲೆಯಲ್ಲಿ 18 ವರ್ಷದೊಳಗಿನ ಮಕ್ಕಳು ಮೊಬೈಲ್ ಬಳಕೆ ಹಾಗೂ ಸಾಮಾಜಿಕ ಜಾಲತಾಣಗಳ ಬಳಕೆ ಮಾಡುವಂತಿಲ್ಲ. ಈ ನಿಟ್ಟಿನಲ್ಲಿ ಶಾಲಾ ಕಾಲೇಜುಗಳಲ್ಲಿ ನಿಗಾ ವಹಿಸಬೇಕು ಎಂದು ತಿಳಿಸಿದರು.

ಪ್ರೀತಿ-ಪ್ರೇಮಕ್ಕೆ ಸಿಲುಕಿ ಹೆಣ್ಣು ಮಕ್ಕಳು ತಮ್ಮಜೀವನ ಹಾಳು ಮಾಡಿಕೊಳ್ಳುತ್ತಾರೆ. ಮೊದಲು ಓದು ಮುಖ್ಯ, ಸರಿ ದಾರಿಯಲ್ಲಿ ನಡೆದು, ಉತ್ತಮ ಭವಿಷ್ಯ ರೂಪಿಸಿಕೊಳ್ಳುವಂತೆ ಮಕ್ಕಳಿಗೆ ಅರಿವು ಮೂಡಿಸಬೇಕು. ಬಾಲ ಗರ್ಭಿಣಿಯರಾಗುವುದರಿಂದ ದೈಹಿಕ ಹಾಗೂ ಮಾನಸಿಕವಾಗಿ ಉಂಟಾಗುವುದರ ಬಗ್ಗೆ ತಾಲೂಕು ಆರೋಗ್ಯ ವೈದ್ಯಾಧಿಕಾರಿಗಳು ಮಕ್ಕಳಿಗೆ ತಿಳವಳಿಕೆ ಮೂಡಿಸಲು ಕ್ರಮ ವಹಿಸುವಂತೆ ತಿಳಿಸಿದರು.

ಪೋಕ್ಸೊ ಪ್ರಕರಣಗಳಲ್ಲಿ ಶಿಕ್ಷೆ ಆಗುವುದರ ಬಗ್ಗೆ ಮಕ್ಕಳಿಗೆ ಕಿರುಚಿತ್ರದ ಮೂಲಕ ತಿಳವಳಿಕೆ ನೀಡಬೇಕು. ಆಕಾಶವಾಣಿ ಹಾಗೂ ಸ್ಥಳೀಯ ಕೇಬಲ್ ವಾಹಿನಿಗಳ ಮೂಲಕವೂ ಅರಿವು ಕಾರ್ಯಕ್ರಮ ಆಯೋಜಿಸುವಂತೆ ಹೇಳಿದರು.

ಬಾಲ್ಯ ವಿವಾಹ, ಲೈಂಗಿಕ ದೌರ್ಜನ್ಯದಂತಹ ವಿಷಯಗಳ ಕುರಿತು ಕಡ್ಡಾಯವಾಗಿ ಎಲ್ಲಾ ಶಾಲೆಗಳಲ್ಲಿ ಪ್ರತಿಯೊಂದು ಮಗುವಿನಿಂದ ಸಮಸ್ಯೆ ಮತ್ತು ಪರಿಹಾರದ ಬಗ್ಗೆ ಪ್ರಬಂಧ ಬರೆಸಲು ಕ್ರಮ ವಹಿಸುವಂತೆ ಶಿಕ್ಷಣ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಮಕ್ಕಳ ಗ್ರಾಮ ಸಭೆಗಳಲ್ಲೂ ಬಾಲ್ಯ ವಿವಾಹ, ಬಾಲ ಕಾರ್ಮಿಕತೆ, ಬಾಲ ಗರ್ಭಿಣಿ, ಪೋಕ್ಸೊ, ಹೆಣ್ಣು ಮಕ್ಕಳ ಸುರಕ್ಷತೆ ಕುರಿತು ಅರಿವು ಮೂಡಿಸಬೇಕು ಎಂದರಲ್ಲದೆ, ತಾಂಡ, ಗೊಲ್ಲರಹಟ್ಟಿ, ಕಾಫಿ ಎಸ್ಟೇಟ್, ವಲಸೆ ಕಾರ್ಮಿಕರಲ್ಲಿ ಅರಿವು ಮೂಡಿಸಲು ಕಾರ್ಯಕ್ರಮ ಆಯೋಜಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಿಂದ ದಾಖಲಾಗಿರುವ ಹಾಗೂ ಜನವರಿಯಿಂದ ಇದುವರೆಗೆ ದಾಖಲಾಗಿರುವ ಪೋಕ್ಸೊ ಪ್ರಕರಣಗಳ ಬಗ್ಗೆ ತಾಲೂಕುವಾರು ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರಲ್ಲದೆ, ಪೋಕ್ಸೊ ಪ್ರಕರಣಗಳಲ್ಲಿ ಕೃತ್ಯಯಾರಿಂದ, ಎಲ್ಲಿ, ಯಾರ ಮೇಲೆ ನಡೆದಿದೆಎಂಬುದರ ಬಗ್ಗೆ ಹಾಗೂ ಆ ಮಕ್ಕಳ ಹಿನ್ನೆಲೆಯ ಬಗ್ಗೆ ಮಾಹಿತಿ ನೀಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಅನಿಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಧರಣಿಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದಿಲೀಪ್ ಇತರರಿದ್ದರು.

# ಭೂ ಒತ್ತುವರಿ ಆರೋಪ ಗ್ರಾಮಸ್ಥರ ಪ್ರತಿಭಟನೆ ತೀವ್ರ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ರುದ್ರಭೂಮಿಗೆ ಮೀಸಲಿಟ್ಟ ಭೂಮಿ ಸೇರಿ ಸರ್ಕಾರಿ ಜಾಗ 10 ಎಕರೆ ಪ್ರದೇಶವನ್ನು ಒತ್ತುವರಿ ಮಾಡಲಾಗಿದೆ ಎಂದು ಆರೋಪಿಸಿ ತಾಲ್ಲೂಕಿನ ಹಳೆಬೀಡು ಹೋಬಳಿ ಪನ್ನತ್ ಪುರ, ದೇವಿಹಳ್ಳಿ, ಭೋವಿ ಕಾಲೋನಿ, ಮುಳ್ಳೇನಹಳ್ಳಿ, ಬ್ಯಾಡರಹಳ್ಳಿ ಸೇರಿ ಸುಮಾರು 10 ಗ್ರಾಮಸ್ಥರು ಪ್ರತಿಭಟನೆ ನಡೆಸಿದರು.

ಮೂಲಸೌಕರ್ಯಕ್ಕಾಗಿ ಸರ್ವೆ ನಂ. 53 ಹಾಗೂ 54ರಲ್ಲಿ ಜಾಗ ಮೀಸಲಿಡಲಾಗಿತ್ತು. ಆದರೆ ಒಂದೇ ಕುಟುಂಬಸ್ಥರು ಅಕ್ರಮ ದಾಖಲೆ ಸೃಷ್ಟಿಸಿ ಭೂ ಕಬಳಿಕೆ ಮಾಡಿದ್ದಾರೆ. ನಮಗೆ ನ್ಯಾಯ ಸಿಗುವರೆಗೂ ಸ್ಥಳ ಬಿಟ್ಟು ತೆರಳುವುದಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಗ್ರಾಮಸ್ಥರಾದ ಮಲ್ಲಿಕಾರ್ಜುನ, ಸುರೇಶ್, ಅಣ್ಣಪ್ಪ ಮಾತನಾಡಿ, ದೇವಿಹಳ್ಳಿ ಗ್ರಾಮದ ಸರ್ವೆ ನಂ. 53 ಹಾಗೂ ಪನ್ನತ್ ಪುರ ಸರ್ವೆ ನಂ. 54ರಲ್ಲಿ ಸರ್ಕಾರಿ ಭೂಮಿ 32 ಎಕರೆ ಇದ್ದು 8 ಜನರಿಗೆ ಒಂದೂವರೆ ಎಕರೆಯಂತೆ ಸರ್ಕಾರಿ ಭೂಮಿ ಮಂಜೂರಾಗಿದೆ. ಉಳಿದ ಭೂಮಿ ಗ್ರಾಮಠಾಣ ಎಂದು ದಾಖಲಾತಿ ಇದ್ದು ಈಗಾಗಲೇ ದೇವಿಹಳ್ಳಿ ಭೋವಿ ಕಾಲೋನಿ ಪನ್ನತ್ ಪುರ, ಮೂಳೇನಹಳ್ಳಿ, ಬ್ಯಾಡರಹಳ್ಳಿ ಗ್ರಾಮಸ್ಥರಿಗೆ ಸುಮಾರು 400ಕ್ಕೂ ಹೆಚ್ಚು ಕುಟುಂಬ ಇರುವ ವಿವಿಧ ಪಂಗಡದವರಿಗೆ ಇಲ್ಲಿ ರುದ್ರಭೂಮಿಗೆ ಜಾಗ ಮೀಸಲಿಡುವಂತೆ ಮನವಿ ಮಾಡಲಾಗಿದೆ. ಜತೆಯಲ್ಲಿ ಪನ್ನತ್ ಪುರ ಗ್ರಾಮದ ಪೂರ್ವಿಕರು ಬಳದಗುಂಡಿಯಲ್ಲಿ ಅವರ ಜನಾಂಗದ ಶವ ಸಂಸ್ಕಾರಕ್ಕೆ ಅಲ್ಲಿ ಜಾಗವನ್ನು ಮೀಸಲಿಟ್ಟುಕೊಂಡಿದ್ದಾರೆ. ಆದರೆ ಸರ್ಕಾರ ಮಂಜೂರು ಮಾಡಿರುವ ಭೂಮಿಗಿಂತಲೂ ಹೆಚ್ಚುವರಿಯಾಗಿ ಒತ್ತುವರಿ ಮಾಡಿಕೊಂಡಿರುವುದಲ್ಲದೆ ರಾತ್ರೋ ರಾತ್ರಿ ಜೆಸಿಬಿಗಳಿಂದ ರುದ್ರಭೂಮಿಯೇ ಇಲ್ಲದಂತೆ ಮುಚ್ಚಿ ಹಾಕಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ವಿಷಯ ತಿಳಿದು ಸ್ಥಳಕ್ಕೆ ಬಂದ ತಹಶಿಲ್ದಾರ್ ಶ್ರೀಧರ್ ಕಂಕನವಾಡಿ, ಯಾರಿಗೆ ಭೂಮಿ ಮಂಜೂರಾಗಿದೆ ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿ ಬೇಕು. ಈ ಸರ್ವೆ ನಂಬರಲ್ಲಿ ಎಷ್ಟು ಜಾಗ ಒತ್ತುವರಿಯಾಗಿದೆ ಸರ್ವೆ ಮಾಡಿಸಲಾಗುವುದು. ಯಾರೇ ಒತ್ತುವರಿ ಮಾಡಿದ್ದರೂ ಬಿಡುವುದಿಲ್ಲ. ರುದ್ರಭೂಮಿಗೆ ಮೀಸಲಿಟ್ಟ ಜಾಗವನ್ನು ಯಾರು ಸಹ ಕಬಳಿಸುವಂತಿಲ್ಲ. ನೀಡಿರುವ ಸಾಗುವಳಿಯಲ್ಲಿ ಎಷ್ಟು ಜಮೀನು ಮಂಜೂರಾಗಿರುತ್ತದೆ. ಅಷ್ಟಕ್ಕೆ ಮಾತ್ರ ಅವರಿಗೆ ಅವಕಾಶ ಇರುತ್ತದೆ. ಅದು ಬಿಟ್ಟು ಹೆಚ್ಚುವರಿ ಒತ್ತುವರಿ ಮಾಡಿದ್ದರೆ ಅದನ್ನು ಹಿಂಪಡೆಯುವ ಅಧಿಕಾರ ನಮಗಿದೆ ಎಂದರು.

ಯಲಹಂಕ ಗ್ರಾ.ಪಂ ಸದಸ್ಯ ಕೃಷ್ಣ, ವೆಂಕಟಭೋವಿ, ಚೌಡಭೋವಿ, ಪರಮೇಶ್, ವೆಂಕಟೇಶ್, ಧರ್ಮಭೋವಿ, ವೆಂಕಟಮ್ಮ, ಸಂಕಮ್ಮ, ಪೆದ್ದಮ್ಮ, ನಂಜಮ್ಮ, ಪಾರ್ವತಿ ಇತರರು ಹಾಜರಿದ್ದರು.

# ಆಲೂರಿನಲ್ಲಿ ಹೆಚ್‌ಐವಿ ಸೋಂಕಿತರು ಕಡಿಮೆ: ಸತೀಶ್



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಆಲೂರು: ಹೆಚ್‌ಐವಿ ಸೋಂಕಿತರ ಪಟ್ಟಿಯಲ್ಲಿ ಆಲೂರು ಕೊನೆಯ ಸ್ಥಾನದಲ್ಲಿದೆ ಎಂದು ಆರೋಗ್ಯ ಶಿಕ್ಷಣಾಧಿಕಾರಿ ಸತೀಶ್ ತಿಳಿಸಿದರು.

ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಕಚೇರಿ, ಸಾರ್ವಜನಿಕ ಆಸ್ಪತ್ರೆ, ತಾಲೂಕು ಕಾನೂನು ಸೇವಾ ಸಮಿತಿ ಮತ್ತು ವಕೀಲರ ಸಂಘದಿಂದ ಹಮ್ಮಿಕೊಂಡಿದ್ದ ವಿಶ್ವ ಏಡ್ಸ್ ದಿನಾಚರಣೆಯಲ್ಲಿ ಮಾತನಾಡಿ, ಜಿಲ್ಲೆಯಲ್ಲಿ ಹೆಚ್‌ಐವಿ ಸೋಂಕಿತರು ಪಟ್ಟಿಯಲ್ಲಿ ಚನ್ನರಾಯಪಟ್ಟಣ ಮೊದಲ ಸ್ಥಾನ, ಹಾಸನ ಎರಡನೇ, ಅರಸೀಕೆರೆ ಮೂರನೇ ಮತ್ತು ಹೊಳೆನರಸೀಪುರ ನಾಲ್ಕನೇ ಸ್ಥಾನದಲ್ಲಿದೆ. ಜಿಲ್ಲೆಯಲ್ಲಿ 13293, ಆಲೂರು ತಾಲ್ಲೂಕಿನಲ್ಲಿ 441 ಸೋಂಕಿತರಿದ್ದಾರೆ. ಏಡ್ಸ್ ರೋಗವು ಹೆಚ್.ಐ.ವಿ ವೈರಸ್‌ನಿಂದ ಹರಡುವ ರೋಗವಾಗಿದ್ದು, ಇದು ದೇಹದ ರಕ್ಷಣಾ ವ್ಯವಸ್ಥೆಯನ್ನು ಕುಂದಿಸುವುದಲ್ಲದೆ ರೋಗ ನಿರೋದಕ ಶಕ್ತಿ ಕಡಿಮೆ ಮಾಡುತ್ತದೆ ಎಂದರು.

ಜೆಎಂಎಫ್‌ಸಿ ನ್ಯಾಯಾಲಯದ ಸಹಾಯಕ ಸರ್ಕಾರಿ ಅಭಿಯೋಜಕ ವಿಜಯ್ ಸಂಪಂಗಾವಿ ಮಾತನಾಡಿ, ಹೆಚ್‌ಐವಿ ಸೋಂಕಿತರನ್ನು ಸಮಾಜದಿಂದ ದೂರವಿಡದೆ ಸಮಾನ ಅವಕಾಶಗಳನ್ನು ನೀಡಿ ಕಳಂಕ ತಾರತಮ್ಯದಿಂದ ಹೊರತರಬೇಕು. ಹೆಚ್‌ಐವಿ ಸೊಂಕಿತರು ಎಲ್ಲರಂತೆ ಬದುಕಲು ಕಾನೂನಿನಲ್ಲಿ ಅವಕಾಶವಿದೆ. ಸಾಮಾಜಿಕ ಸವಲತ್ತುಗಳೊಂದಿಗೆ ಎಲ್ಲಾ ಕ್ಷೇತ್ರದಲ್ಲೂ ಇರುವ ಅವಕಾಶಗಳನ್ನು ಕಲ್ಪಿಸಿಕೊಟ್ಟು ಸಮಾಜದ ಮುಖ್ಯ ವಾಹಿನಿಗೆ ಕರೆತರಬೇಕು ಎಂದರು.

ವಕೀಲರ ಸಂಘದ ಅಧ್ಯಕ್ಷ ಎಂ.ಎಸ್. ಮಹೇಶ್ ಮಾತನಾಡಿ, ಹೆಚ್‌ಐವಿ ಸೋಂಕಿತರಿಗೆ ಉಚಿತ ಕಾನೂನು ಸಲಹೆ ಲಭ್ಯವಿದೆ. ಏಡ್ಸ್ ರೋಗವು ಹೆಚ್‌ಐವಿ ವೈರಸ್‌ನಿಂದ ಹರಡುತ್ತದೆ. ಅದು ದೇಹದ ರಕ್ಷಣಾ ವ್ಯವಸ್ಥೆಯನ್ನು ಕುಂದಿಸುವುದಲ್ಲದೆ ರೋಗ ನಿರೋಧಕ ಶಕ್ತಿ ಕಡಿಮೆ ಮಾಡುತ್ತದೆ ಎಂದರು. ಪ್ರಭಾರ ಪ್ರಾಂಶುಪಾಲ ಇರ್ಫಾನ್ ಪಾಷ ಮಾತನಾಡಿ, ಪ್ರತಿವರ್ಷ ಡಿಸೆಂಬರ್ ತಿಂಗಳಲ್ಲಿ ಏಡ್ಸ್ ನಿಯಂತ್ರಣದ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ವಿಶೇಷವಾಗಿ ಕಾಲೇಜು ವಿದ್ಯಾರ್ಥಿಗಳು ಹದಿಹರೆಯದ ವಯಸ್ಸಿನವರಾಗಿದ್ದು, ಏಡ್ಸ್ ಬಗ್ಗೆ ಜಾಗೃತರಾಗುವಂತೆ ತಿಳಿಸಿದರು.

# ಮಹಿಳಾ ಸಾಹಿತ್ಯ ವಿಮರ್ಶೆಯಲ್ಲಿ ನಿರಂತರ ಅನ್ಯಾಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಸ್ತ್ರೀ ಸಾಹಿತ್ಯಕ್ಕೆ ವಿಮರ್ಶೆಯಲ್ಲಿ ಅನ್ಯಾಯವಾಗಿರುವುದು ಯುಗ ಯುಗಗಳಿಂದಲೂ ಕಂಡುಬರುವ ಜಾಗತಿಕ ಸಮಸ್ಯೆ ಎಂದು ಜಿಲ್ಲಾ ಬರಹಗಾರರ ಸಂಘದ ಅಧ್ಯಕ್ಷ ಡಿ. ಸುಂದರೇಶ ಉಡುವಾರೆ ಹೇಳಿದರು.

ಜಿಲ್ಲಾ ಬರಹಗಾರರ ಸಂಘದಿಂದ ಇತ್ತೀಚೆಗೆ ಕನ್ನಡ ಸಾಹಿತ್ಯ ಪರಿಷತ್ ಭವನದಲ್ಲಿ ಹಮ್ಮಿಕೊಂಡಿದ್ದ ವಿಮರ್ಶೆಯಲ್ಲಿ ಸ್ತ್ರೀ ಸಾಹಿತ್ಯಕ್ಕೆ ಅನ್ಯಾಯ ವಿಷಯವಾಗಿ ವಿಚಾರಗೋಷ್ಠಿ, ಸಂವಾದ ಮತ್ತು ಕವಿಗೋಷ್ಠಿ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ನಿಟ್ಟಿನಲ್ಲಿ ಹಾಸನ ಜಿಲ್ಲೆಯಿಂದ ರಾಷ್ಟ್ರ ಮಟ್ಟಕ್ಕೆ ಒಳ್ಳೆಯ ಸಂದೇಶ ರವಾನೆಯಾಗಬೇಕಾಗಿದೆ. ಸ್ತ್ರೀ ಸಾಹಿತಿಗಳು ಈ ಕುರಿತು ದೃಢ ನಿರ್ಧಾರ ಕೈಗೊಳ್ಳಬೇಕು ಎಂದು ಹೇಳಿದರು.

ಹಂಪಿ ವಿಶ್ವವಿದ್ಯಾಲಯದ ನಿವೃತ್ತ ಕುಲಪತಿ ಮಲ್ಲಿಕಾ ಘಂಟಿ ಮಾತನಾಡಿ, ವಿಮರ್ಶಾ ಕ್ಷೇತ್ರದಲ್ಲಿ ಸ್ತ್ರೀ ಸಾಹಿತ್ಯಕ್ಕೆ ವಿವಿಧ ಕಾಲಘಟ್ಟಗಳಲ್ಲಿ ಸಂಭವಿಸಿರುವ ಅನ್ಯಾಯಗಳ ಬಗ್ಗೆ ಆಳವಾದ ಚರ್ಚೆ ನಡೆಸಿದರು.

ಸಾಹಿತಿ ಡಾ. ಬರಾಳು ಶಿವರಾಮ್ ಮಾತನಾಡಿ, ಸುಂದರೇಶ ಡಿ. ಉಡುವಾರೆ ಅಧ್ಯಕ್ಷರಾದ ನಂತರ ಜಿಲ್ಲೆಯಲ್ಲಿ ಹಾಗೂ ರಾಜ್ಯ ಮಟ್ಟದಲ್ಲಿ ಹತ್ತಾರು ಕಾರ್ಯಕ್ರಮಗಳನ್ನು ನಡೆಸಿ ನೂರಾರು ಪ್ರತಿಭೆಗಳಿಗೆ ವೇದಿಕೆ ಒದಗಿಸಿದ್ದಾರೆ. ಅನೇಕ ಸಾಧಕರನ್ನು ಗುರುತಿಸಿ ರಾಜ್ಯ ಪ್ರಶಸ್ತಿಗಳನ್ನು ನೀಡುವ ಮೂಲಕ ಗೌರವಿಸಿದ್ದಾರೆ.

ಇವರ ವೈಚಾರಿಕತೆ ಹಾಗೂ ಕಾರ್ಯಪಟುತ್ವ ಶ್ಲಾಘನೀಯ ಎಂದು ಪ್ರಶಂಸಿಸಿದರು.

ನಿವೃತ್ತ ಪ್ರಾಂಶುಪಾಲ ಮೇಟಿಕೆರೆ ಹಿರಿಯಣ್ಣ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಸಾಹಿತ್ಯ ಓದುವವರ ಸಂಖ್ಯೆ ಕಡಿಮೆಯಾಗುತ್ತಿದೆ. ಬರಹಗಾರರ ಪುಸ್ತಕಗಳನ್ನು ಕೊಂಡು ಓದುವವರಿಲ್ಲದಿರುವುದು ಸಾಹಿತ್ಯದ ಕುರಿತ ಒಲವಿನ ಕೊರತೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಗಡಿನಾಡು ಕನ್ನಡ ಪ್ರಾಧಿಕಾರದ ಅಧ್ಯಕ್ಷ ಹಾಗೂ ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತಿನ ಪ್ರತಿನಿಧಿ ಸೋಮಶೇಖರ ಮಾತನಾಡಿ, ಶರಣ ಸಾಹಿತ್ಯ ಪೂರ್ವ ಮತ್ತು ನಂತರದ ದಿನಮಾನಗಳಲ್ಲಿ ಸ್ತ್ರೀ ಸಾಹಿತ್ಯಕ್ಕೆ ಲಭ್ಯವಾಗದ ಮಾನ್ಯತೆ ಬಗ್ಗೆ ಚರ್ಚೆ ಮಂಡಿಸಿದರು.

ಲೇಖಕಿ ಡಾ. ನಿರ್ಮಲ ಯಲಿಗಾರ್ ಮಾತನಾಡಿದರು. ಜಿಲ್ಲಾ ಬರಹಗಾರರ ಸಂಘದ ಗೌರವಾಧ್ಯಕ್ಷ ವೆಂಕಟೇಶ, ಶೈಲಜ ಹಾಸನ, ಶಾಂತಾ ಅತ್ನಿ, ಡಾ. ಅಬ್ದುಲ್ ಬಶೀರ್, ಹೇಮ ಪಟ್ಟಣಶೆಟ್ಟಿ, ಸುವರ್ಣ, ಕೆ.ಟಿ. ಶಿವಪ್ರಸಾದ್, ಪ್ರೇಮ ಪ್ರಶಾಂತ್, ಭಾರತಿ ಹಾದಿಗೆ, ಜಿಲ್ಲಾ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್. ಕೆಂಚೇಗೌಡ ಇತರರಿದ್ದರು.

# ಸುತ್ತೂರು ಜಾತ್ರಾ ರಥಕ್ಕೆ ಭಕ್ತಿಯ ಸ್ವಾಗತ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಸುತ್ತೂರು ಜಾತ್ರಾ ಮಹೋತ್ಸವ ಅಂಗವಾಗಿ ಸಂಚರಿಸುತ್ತಿರುವ ಪ್ರಚಾರದ ರಥವನ್ನು ನಗರದಲ್ಲಿ ಬುಧವಾರ ಸ್ವಾಗತಿಸಲಾಯಿತು.

ಜ. 15 ರಿಂದ 20ರ ವರೆಗೆ ಜಾತ್ರಾ ಮಹೋತ್ಸವ ಹಿನ್ನೆಲೆಯಲ್ಲಿ ರಥ ಸಂಚಾರ ಕೈಗೊಳ್ಳಲಾಗಿದೆ. ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾದಿಂದ ಸ್ವಾಗತಿಸಿ ಪೂಜೆ ಸಲ್ಲಿಸುವ ಮೂಲಕ ಬರಮಾಡಿಕೊಂಡರು. ಮೊದಲು ತಣ್ಣೀರುಹಳ್ಳ ಮಠ, ಶ್ರೀ ಬಸವೇಶ್ವರ ಕಲ್ಯಾಣ ಮಂಟಪ ಹಾಗೂ ಜವೇನಹಳ್ಳಿ ಮಠಕ್ಕೆ ಸುತ್ತೂರು ಜಾತ್ರಾ ಮಹೋತ್ಸವದ ರಥ ಬಂದಾಗ ಆಡಳಿತ ಮಂಡಳಿಯವರು, ಕಾಲೇಜಿನ ವಿದ್ಯಾರ್ಥಿಗಳು, ಮಠದ ಭಕ್ತರು ಪೂಜೆ ಸಲ್ಲಿಸಿ ಸ್ವಾಗತಿಸಿದರು.

ಸುತ್ತೂರು ಜಾತ್ರಾ ಮಹೋತ್ಸವ ಅಂಗವಾಗಿ ರಾಜ್ಯದ ಹಲವು ಜಿಲ್ಲೆಯಲ್ಲಿ ಪ್ರಚಾರ ರಥಯಾತ್ರೆ ಸಂಚರಿಸಿ ಜಾತ್ರೋತ್ಸವ ಹಾಗು ವಿವಿಧ ಧಾರ್ಮಿಕ, ಸಾಂಸ್ಕೃತಿಕ ಕಾರ್ಯಕ್ರಮಗಳ ಬಗ್ಗೆ ತಿಳಿಸಲಾಗುತ್ತಿದೆ.

ಲಿಂಗಾಯತ ವೀರಶೈವ ಸಮಾಜದ ಜಿಲ್ಲಾಧ್ಯಕ್ಷ ಬಿ.ಪಿ.ಐಸಾಮಿಗೌಡ, ಉಪಾಧ್ಯಕ್ಷ ಬಿ.ಎಂ. ಭುವನಾಕ್ಷ, ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಅಧ್ಯಕ್ಷ ಕಟ್ಟಾಯ ಶಿವಕುಮಾರ್, ಕಿರಣ್ ಕುಮಾರ್ ಹೊಸಮನಿ, ತಣ್ಣೀರುಹಳ್ಳ ಮಠದ ವ್ಯವಸ್ಥಾಪಕ ಶಂಕರ್ ಇತರರಿದ್ದರು.

# ಇತಿಹಾಸದಲ್ಲಿ ಈ ದಿನ

## ಡಿಸೆಂಬರ್-11

1946: ಯುನಿಸೆಫ್ ಸ್ಥಾಪನೆ, ವಿಶ್ವದ ಮಕ್ಕಳ ಕಲ್ಯಾಣಕ್ಕಾಗಿ ಕೆಲಸ ಮಾಡುವ ಮಹತ್ವದ ಸಂಸ್ಥೆ ಆರಂಭಗೊಂಡ ದಿನ.

1941: ದ್ವಿತೀಯ ವಿಶ್ವ ಯುದ್ಧದಲ್ಲಿ ಜರ್ಮನಿ ಮತ್ತು ಇಟಲಿ, ಅಮೇರಿಕಾದ ವಿರುದ್ಧ ಯುದ್ಧ ಘೋಷಣೆ ಮಾಡಿದ್ದ ದಿನ.

1962: ಅರ್ಜೆಂಟಿನಾ ದೇಶದ ಕಾಂತವೀರೆಯಾಗಿದ್ದ ಏವ ಪೆರೋನ್ ಅವರನ್ನು ರಾಷ್ಟ್ರದ ಆಧ್ಯಾತ್ಮಿಕ ನಾಯಕಿ ಎಂದು ಘೋಷಿಸಿದ ದಿನ.

1972: ನಾಸಾದ ಅಪೋಲೋ 17 ಮಿಷನ್‌ನ ಅಂತರಿಕ್ಷಯಾತ್ರಿಗಳು ಚಂದ್ರನ ಮೇಲ್ಮೈ ಸಿಂಧ್ 'ಬ್ಲೂ ಮಾರ್ಬಲ್' ಎಂದು ಪ್ರಸಿದ್ಧಿಯಾದ ಭೂಮಿಯ ಐಕಾನಿಕ್ ಫೋಟೋವನ್ನು ತೆಗೆದ ದಿನ.

1997: ಕಿಯೋಟೊ ಹವಾಮಾನ ಒಪ್ಪಂದಕ್ಕೆ ಬುನಾದಿ ಹಾಕಿದ ದಿನ. ವಿಶ್ವದ ಹವಾಮಾನ ರಕ್ಷಣೆಗಾಗಿ ಮಹತ್ವದ ಹೆಜ್ಜೆ.

### ಜನನ

1803: ಹೆಕ್ಟರ್ ಬೆರ್ಲಿಯೊರ್ಝ್, ಫ್ರೆಂಚ್ ಸಂಗಿತಗಾರ, ಸಿಂಫೊನಿಕ್ ಕೃತಿಗಳಿಗಾಗಿ ಪ್ರಸಿದ್ಧ

1882: ಮ್ಯಾಕ್ಸ್ ಬೋರ್ನ್, ಜರ್ಮನ್ ಭೌತಶಾಸ್ತ್ರಜ್ಞ, ಕ್ವಾಂಟಮ್ ಮೆಕಾನಿಕ್ಸ್ ಕ್ಷೇತ್ರದ ಮಹತ್ವದ ವಿಜ್ಞಾನಿ, ನೋಬೆಲ್ ಪ್ರಶಸ್ತಿ ಪುರಸ್ಕೃತ

1922: ದಿಲೀಪ್ ಕುಮಾರ್, ಭಾರತೀಯ ಚಲನಚಿತ್ರರಂಗದ ಪ್ರಸಿದ್ಧ ನಟ, 'ಟ್ರಾಜಿಡಿ ಕಿಂಗ್' ಎಂದು ಖ್ಯಾತಿ ಪಡೆದವರು

1944: ಟಿ.ಕೆ. ರಾಮರಾವ್, ಕನ್ನಡ ಚಲನಚಿತ್ರ ಕ್ಷೇತ್ರದ ಪ್ರಸಿದ್ಧ ನಿರ್ಮಾಪಕ ನಿರ್ದೇಶಕ

### ಮರಣ

1843: ಹರಿಶ್ಚಂದ್ರ, (ಪತ್ರಿಕೋದ್ಯಮ), ಮರಾಠಿ ಪತ್ರಿಕೆ ದುರ್ಗಾ ರಂಜನ ಸಂಪಾದಕ, ಭಾರತದ ಆರಂಭಿಕ ಪತ್ರಕರ್ತರಲ್ಲಿ ಒಬ್ಬರು.

1971: ಅಶೋಕ ಕುಮಾರ್ ಚಟರ್ಜಿ, ಭಾರತೀಯ ಸ್ವಾತಂತ್ರ್ಯ ಹೋರಾಟಗಾರ ಮತ್ತು ಸಂಸದ.

2008: ಡ್ಯಾನಿ ಕ್ಯಾಲ್ಫರ್ಸನ್, ಇಂಗ್ಲಿಷ್ ನಟ

2012: ರವಿ ಶ್ರೀನಾಥ್, ಕನ್ನಡ ಚಿತ್ರರಂಗದ ನಟ

# ಕಾಡಾನೆ ಹಾವಳಿ ನಿಯಂತ್ರಣಕ್ಕೆ ಆಗ್ರಹಿಸಿ ಪ್ರತಿಭಟನೆ



ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಅರೇಹಳ್ಳಿ: ಮಿತಿ ಮೀರಿದ ಕಾಡಾನೆಗಳ ಹಾವಳಿ ಖಂಡಿಸಿ ಬೇಲೂರು ತಾಲೂಕು ಅರೇಹಳ್ಳಿ ಹೋಬಳಿ ಅನುಘಟ್ಟ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕಣಗುಪ್ಪೆ, ಅನುಘಟ್ಟ ಹಾಗೂ ಸುತ್ತಮುತ್ತಲಿನ ಗ್ರಾಮಗಳ ರೈತರು ಹಾಗೂ ಕಾಫಿ ಬೆಳೆಗಾರರು ರಸ್ತೆ ತಡೆ ನಡೆಸಿ ಅರಣ್ಯ ಸಚಿವರ ಮತ್ತು ಇಲಾಖೆ ಅಧಿಕಾರಿಗಳ ವಿರುದ್ಧ ಪ್ರತಿಭಟನೆ ನಡೆಸಿದರು.

ಬೇಲೂರಿನ ಟಿಎಪಿಸಿಎಂಎಸ್ ಮಾಜಿ ಅಧ್ಯಕ್ಷ ಕೆ.ಜಿ. ಕುಮಾರ್ ಮಾತನಾಡಿ, ಕಣಗುಪ್ಪೆ ಭಾಗದಲ್ಲಿ ಕಳೆದ 20 ದಿನಗಳಿಂದ 30ಕ್ಕೂ ಹೆಚ್ಚು ಕಾಡಾನೆಗಳು ನೂರಕ್ಕೂ ಹೆಚ್ಚು ಎಕರೆಯಲ್ಲಿ ಬೆಳೆಯಾಗಿದ್ದ ಭತ್ತ, ಕಾಫಿ, ಶುಂಠಿ, ತೆಂಗು, ಅಡಿಕೆ ಸೇರಿದಂತೆ ಇನ್ನಿತರ ಬೆಳೆಗಳನ್ನು ನಾಶ ಮಾಡಿದೆ. ಅರಣ್ಯ ಇಲಾಖೆಯ ಯಾವೊಬ್ಬ ಅಧಿಕಾರಿಯೂ ರೈತನ ನೋವಿಗೆ ಸ್ಪಂದಿಸುತ್ತಿಲ್ಲ. ಸಾವು ನೋವಾದಾಗ ಮಾತ್ರ ಬರುವ ಅರಣ್ಯ ಇಲಾಖೆ ಅಧಿಕಾರಿಗಳು ಸೌಜನ್ಯಕ್ಕೂ ಬೆಳೆ ಹಾನಿ ಪರಿಶೀಲನೆ ಮಾಡಿಲ್ಲ. ಇನ್ನು ಅರಣ್ಯ ಸಚಿವರು ಹಾಸನ, ಕೊಡಗು, ಚಿಕ್ಕಮಗಳೂರು ಭಾಗದ ರೈತರ ಸಮಸ್ಯೆಗಳನ್ನು ಆಲಿಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ ಎಂದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಲಲಿತಾ, ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ವೀರಭದ್ರಶೆಟ್ಟಿ, ಬಸವರಾಜ್, ರೈತ ಸಂಘದ ಅಧ್ಯಕ್ಷ ಭೋಗ ಮಲ್ಲೇಶ್, ಅದ್ದೂರಿ ಕುಮಾರ್, ಶಾರೀಬ್ ಫರ್ಹಾನ್, ಸತೀಶ್, ವೆಂಕಟೇಶ್ ದೇವರಾಜು, ಮಂಜು ನಾಥ್, ಶಿವಶಂಕರಪ್ಪ ಹಾಗೂ ಇನ್ನಿತರರು ಇದ್ದರು.

# 2.48 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಮನೆಯ ಹೆಂಚು ತೆಗೆದು ಒಳನುಗ್ಗಿರುವ ಕಳ್ಳರು 42.48 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕದ್ದಿರುವ ಘಟನೆ ತಾಲ್ಲೂಕಿನ ಗವೇನಹಳ್ಳಿಯಲ್ಲಿ ನಡೆದಿದೆ. ಚಿನ್ನಾಭರಣ ರಿಪೇರಿ ಮಾಡಿಕೊಂಡಿದ್ದ ಅಕ್ಕಸಾಲಿಗ ಸೋಮಶೇಖರ ಎಂಬುವವರ ಮನೆಯಲ್ಲಿ ಡಿ. 7 ರಿಂದ 9ರ ನಡುವೆ ಕಳ್ಳತನ ನಡೆದಿದೆ. ಬೆಂಗಳೂರಿನ ಅವರ ಮಗಳ ಮನೆಗೆ ಕುಟುಂಬ ಸಮೇತ ತೆರಳಿದ್ದರು. ಮೂರು ದಿನಗಳ ಬಳಿಕ ವಾಪಾಸ್ ಬಂದು ನೋಡಿದಾಗ ಬೀರುವಿನಲ್ಲಿಟ್ಟಿದ್ದ ಆಭರಣ ಇಲ್ಲದಿರುವುದು ಗೊತ್ತಾಗಿದೆ. ಗ್ರಾಹಕರು ಆಭರಣ ತಯಾರಿಕೆ ಹಾಗೂ ರಿಪೇರಿಗಾಗಿ ಕೊಟ್ಟಿದ್ದ 37 ಗ್ರಾಂ 4 ಮಿಲಿ ಗ್ರಾಂ ತೂಕದ ಚಿನ್ನದ ಘಟ್ಟಿ, 9 ಗ್ರಾಂ 5 ಮಿಲಿ ಗ್ರಾಂ ತೂಕದ ವಿವಿಧ ಬಗೆಯ ಚಿನ್ನಾಭರಣ ಕಳವು ಮಾಡಿದ್ದು ಅದರ ಒಟ್ಟು ಮೌಲ್ಯ 2.48 ಲಕ್ಷ ರೂ. ಆಗಿದೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಲು ಸಲಹೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್



ಹಾಸನ: ಆರೋಗ್ಯಕರ ಸಮಾಜ ನಿರ್ಮಾಣದಲ್ಲಿ ವೈದ್ಯರ ಕೊಡುಗೆ ಅಪಾರವಾಗಿದ್ದು ರೋಗಿಗಳೊಂದಿಗೆ ಸೌಜನ್ಯದಿಂದ ವರ್ತಿಸಿದರೆ ಅರ್ಧ ಕಾಯಿಲೆ ವಾಸಿಯಾಗುತ್ತದೆ ಎಂದು ಸಕಲೇಶಪುರ ಶಾಸಕ ಸಿಮೆಂಟ್ ಮಂಜು ತಿಳಿಸಿದರು.

ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಹಾಸನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯಿಂದ ತಾಲ್ಲೂಕಿನ ಅಂಕಪುರ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಇತ್ತೀಚೆಗೆ ಆಯೋಜಿಸಿದ್ದ ರಾಷ್ಟ್ರೀಯ ಸೇವಾ ಯೋಜನೆ ವಾರ್ಷಿಕ ವಿಶೇಷ ಶಿಬಿರ ಉದ್ಘಾಟಿಸಿ ಮಾತನಾಡಿ, ನಮ್ಮ ಸಮಾಜ ವೈದ್ಯರನ್ನು ದೇವರಿಗೆ ಹೋಲಿಸಿದೆ. ಸೈನಿಕರು ದೇಶ ರಕ್ಷಣೆ ಮಾಡಿದರೆ ವೈದ್ಯರು ಸಮಾಜ ಕಾಪಾಡುತ್ತಾರೆ ಎಂದರು.

ಕಾಂಗ್ರೆಸ್ ಕಾರ್ಮಿಕ ಘಟಕದ ಅಧ್ಯಕ್ಷ ಹೇಮಂತ್‌ಗೌಡ ಮಾತನಾಡಿ, ಅಂಕಪುರದಲ್ಲಿ ಶಿಬಿರ ಹಮ್ಮಿಕೊಂಡಿರುವುದು ಒಳ್ಳೆಯ ಬೆಳವಣಿಗೆ. ಗ್ರಾಮದಲ್ಲಿ ಆರೋಗ್ಯ ಮೇಳ ಹಮ್ಮಿಕೊಂಡರೆ ಸಂಪೂರ್ಣ ಸಹಕಾರ ನೀಡುತ್ತೇನೆಂದು ಭರವಸೆ ನೀಡಿದರು.

ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮ ಅಧಿಕಾರಿ ನಿಶ್ಚಿತಾಕುಮಾರಿ, ತಾಲ್ಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಪಾಪಣ್ಣ ಮಾತನಾಡಿದರು.

ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ರಾಜಕುಮಾರ, ಉಪಾಧ್ಯಕ್ಷ ಅಭಿಷೇಕ್, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಸುರೇಶ್, ಶಿಕ್ಷಕ ನಾಗರಾಜು, ವಿಜಯ್ ಕುಮಾರ್, ಹರ್ಷ, ಲೋಕೇಶ್, ರವಿಕುಮಾರ್, ಧನರಾಜ್ ಹಾಗೂ ಇತರರಿದ್ದರು.

# ಜಗಳದ ವೇಳೆ ಕೆನ್ನೆಗೆ ಹೊಡೆದ ದ್ವೇಷಕ್ಕೆ ಸ್ನೇಹಿತನ ಹತ್ಯೆ

## ಗೆಳೆಯನ ವಿರುದ್ಧ ಪ್ರತೀಕಾರ ತೀರಿಸಿಕೊಂಡ ಉಲ್ಲಾಸ್ | ಪೊಲೀಸ್ ವಶಕ್ಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ನಗರ ಹೊರವಲಯದಲ್ಲಿ ನಡೆದ ಹೂವಿನಹಳ್ಳಿಯ ಕೀರ್ತಿ ಕೊಲೆಗೆ ಸ್ನೇಹಿತ ಉಲ್ಲಾಸ್‌ನ ಕೆನ್ನೆಗೆ ಹೊಡೆದಿದ್ದೇ ಕಾರಣ ಎಂಬ ಸ್ಫೋಟಕ ಮಾಹಿತಿ ತಿಳಿದುಬಂದಿದೆ.

ಈ ಕುರಿತು ಸುದ್ದಿಗೋಷ್ಠಿಯಲ್ಲಿ ಬುಧವಾರ ಮಾತನಾಡಿದ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮೊಹಮ್ಮದ್ ಸುಜೀತಾ ಅವರು, ಕೀರ್ತಿ, ಉಲ್ಲಾಸ್ ಹಾಗು ಕೃತ್ಯದಲ್ಲಿ ಭಾಗಿಯಾದ ಎಲ್ಲರೂ ಮೂರು ವರ್ಷಗಳಿಂದ ಸ್ನೇಹಿತರಾಗಿದ್ದರು. ಎಲ್ಲರೂ ಆಟೋ ಚಾಲಕರಾಗಿ ಬದುಕು ಕಟ್ಟಿಕೊಂಡಿದ್ದರು. ಡಿ. 8ರಂದು ಉಲ್ಲಾಸ್ ಹಾಗೂ ಕೀರ್ತಿ ನಡುವೆ ಗಲಾಟೆಯಾಗಿತ್ತು. ಜಗಳದಲ್ಲಿ ಮೃತ ಕೀರ್ತಿಯು ಉಲ್ಲಾಸ್‌ನ ಕೆನ್ನೆಗೆ ಹೊಡೆದಿದ್ದ. ಅದೇ ದ್ವೇಷದಿಂದ ನಿರ್ಜನ ಪ್ರದೇಶಕ್ಕೆ ಆತನನ್ನು ಕರೆದುಕೊಂಡು ಹೋಗಿ ಕಲ್ಲಿನಿಂದ ಜಜ್ಜಿ ಹತ್ಯೆಗೈದಿದ್ದಾರೆ ಎಂದರು.



ಚನ್ನಪಟ್ಟಣ ಗ್ರಾಮದ ಪವನಪುತ್ರ ಕೋಳಿ ಫಾರಂನ ಖಾಲಿ ಜಾಗದಲ್ಲಿ ಯುವಕನ ಕೊಲೆಗೈದು ವಿಡಿಯೋ ಹರಿಬಿಟ್ಟ ಪ್ರಕರಣದ ಪ್ರಮುಖ ಆರೋಪಿಯನ್ನು ಬಂಧಿಸಿ ಇತರರ ಬಂಧನಕ್ಕೆ ತಂಡ ರಚಿಸಲಾಗಿದೆ ಎಂದರು.

ಸೋಮವಾರ ಸ್ನೇಹಿತರಾದ ದೊಡ್ಡಕಣಗಾಲ್‌ನ ಉಲ್ಲಾಸ್ ಹಾಗೂ ಮತ್ತಿತರರು ಕರೆದೊಯ್ದು ಎದೆ ಮೇಲೆ ಕಲ್ಲು ಎತ್ತಿಹಾಕಿ ಹತ್ಯೆಗೈದಿದ್ದಾರೆ. ನಂತರ ಅವರೇ ವಿಡಿಯೋ ಮಾಡಿ ತಮ್ಮ ಸ್ನೇಹಿತರಿಗೆ ವಾಟ್ಸಾಪ್ ಮೂಲಕ ಕಳುಹಿಸಿದ್ದರು. ನಂತರ ಸಾಮಾಜಿಕ ಜಾಲತಾಣಗಳಲ್ಲಿ ಪೋಸ್ಟ್ ಮಾಡಿ ವಿಕೃತಿ ಮೆರೆದಿದ್ದರು. ವಿಚಾರ ತಿಳಿಯುತ್ತಿದ್ದಂತೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿದ್ದರು. ಪ್ರಮುಖ ಆರೋಪಿ ಉಲ್ಲಾಸ್‌ನನ್ನು ವಶಕ್ಕೆ ಪಡೆಯಲಾಗಿದೆ ಎಂದು ಮಾಹಿತಿ ನೀಡಿದರು.

ಆರೋಪಿ ಉಲ್ಲಾಸ್ ವಿರುದ್ಧ ನಾಲ್ಕು ವರ್ಷಗಳ ಹಿಂದೆ ಪ್ರಕರಣ ದಾಖಲಾಗಿತ್ತು. ಆ ಕೇಸಿನಲ್ಲಿ ಖುಲಾಸೆಯಾಗಿದ್ದ. ಉಳಿದಂತೆ ಯಾರ ವಿರುದ್ಧವೂ ಗಂಭೀರ ಪ್ರಕರಣಗಳಿಲ್ಲ. ಡಿ. 8ರಂದು ನಡೆದ ಗಲಾಟೆ ಹೊರತುಪಡಿಸಿ ಇವರ ನಡುವೆ ಯಾವ ದ್ವೇಷವಿರಲಿಲ್ಲ. ಆ ದಿನ ಯಾವ ಕಾರಣಕ್ಕೆ ಜಗಳ ಮಾಡಿಕೊಂಡಿದ್ದರೆಂಬುದು ತನಿಖೆಯಿಂದ ತಿಳಿದು ಬರಬೇಕಿದೆ. ಉಲ್ಲಾಸ್ ಹಾಗೂ ಸ್ನೇಹಿತರು ಗಾಂಜಾ ಸೇವಿಸಿರುವ ಕುರಿತು ವೈದ್ಯಕೀಯ ವರದಿ ಬಳಿಕ ಗೊತ್ತಾಗುತ್ತದೆ ಎಂದು ಮಾಹಿತಿ ನೀಡಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248